ಶ್ರೀ ಜಿ.ಕರುಣಾಕರ ರೆಡ್ಡಿ : ಮಾನ್ಯ ಅಧ್ಯಕ್ಷರೆ, ಇನ್ನು ಉಳಿದ 3 ಎಕರೆ ಜಮೀನು ಏನು ಇದೆ. ಅದರಲ್ಲಿ ಸುಮಾರು 11 ಜನರು ಒತ್ತುವರಿ ಮಾಡಿಕೊಂಡಿದ್ದಾರೆ. ಅದರಲ್ಲಿ 3 ಜನರು ಹತ್ತಿ ಬೆಳೆಯನ್ನು ಹಾಕಿದ್ದಾರೆ. ಇನ್ನು ಒಂದು ತಿಂಗಳಲ್ಲಿ ಬೆಳೆ ಕಟಾವ್ ಆಗುತ್ತದೆ. ಅದು ಆದಮೇಲೆ ಅವರು ಬಿಟ್ಟು ಕೊಡುತ್ತೇವೆಂದು ಹೇಳಿದ್ದಾರೆ. ಅದು ಅದ ತಕ್ಷಣ ಒಂದು ತಿಂಗಳಲ್ಲಿ ಖಿಲ್ಲಾ ಪಡಿಸಿಕೊಡುತ್ತೇವೆ.

ಅಧ್ಯಕ್ಷರು : ಆಯಿತು.

ಡಾ: ಎಂ.ಸಿ.ಸುಧಾಕರ್ : ಮಾನ್ಯ ಅಧ್ಯಕ್ಷರೆ, ತಾವು ಬೇರೆಯದಕ್ಕೆ ಅವಕಾಶ ಕೊಟ್ಟಿದ್ದೀರಿ, ಒಂದು ನಿಮಿಷ ಅವಕಾಶ ಕೊಡಿ.

ಅಧ್ಯಕ್ಷರು : ಮಾನ್ಯ ಸಚಿವರು ಒಂದು ತಿಂಗಳು ಎಂದು ಹೇಳಿದ್ದಾರೆ. ಇದು ಗಮನ ಸೆಳೆಯುವುದು.

ಡಾ: ಎಂ.ಸಿ. ಸುಧಾಕರ್ : ಈಗ ಅಲ್ಲಿ ಅಲ್ಪಸಂಖ್ಯಾತರೆಲ್ಲಾ ಸ್ವಯಂ ಇಚ್ಛೆಯಿಂದ ಬಿಟ್ಟು ಕೊಡುವುದಕ್ಕೆ ತಯಾರಿದ್ದಾರೆ, ಒಂದಿಬ್ಬರು ಬೋರ್‌ವೆಲ್ ಹಾಕಿಕೊಂಡಿದ್ದಾರೆ. ಅದಕ್ಕೆ ಮಾನ್ಯ ಸಚಿವರು ಸ್ಪಷ್ಟವಾಗಿ ಹೇಳಬೇಕಾಗುತ್ತದೆ.

ಅಧ್ಯಕ್ಷರು : ಅವರು ಒಂದು ತಿಂಗಳು ಎಂದು ಹೇಳಿದ್ದಾರಲ್ಲಾ, ಇನ್ನು ಏನು ಸ್ಪಷ್ಟೀಕರಣ ಬೇಕು?

ಡಾ: ಎಂ.ಸಿ.ಸುಧಾಕರ್ : ಒಂದು ತಿಂಗಳು ಎಂದು ಹೇಳಿದ್ದಾರೆ. ಈಗಾಗಲೇ ಹಲವಾರು ಬಾರಿ ಸದನದಲ್ಲಿ ಉತ್ತರ ಕೊಟ್ಟಿರುವಂಥದ್ದು ಯಾವುದು ಆಗಿಲ್ಲ.

ಅಧ್ಯಕ್ಷರು : ಈಗ ಪ್ರಕಟಣೆ.

8. ಪ್ರಕಟಣೆ :

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ ಕರ್ನಾಟಕ ವಿಧಾನ ಪರಿಷತ್ತು ದಿನಾಂಕ: 11.03.2010 ರಂದು ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿದೆಯೆಂದು ತಿಳಿಸಿರುತ್ತಾರೆ.

1. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ, 2009
2. ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2009

ಅಧ್ಯಕ್ಷರು : ಈಗ ಸಭೆಯು ಮುಕ್ತಾಯವಾಗಿ ನಾಳೆ ಬೆಳಿಗ್ಗೆ 10.00 ಗಂಟೆಗೆ ಸೇರುವುದು.

(ಸದನವು ಸಂಜೆ 8 ಗಂಟೆ 25 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 12ನೇ ಮಾರ್ಚ್ ಮಾಹೆ 2010ರ ಶುಕ್ರವಾರದಂದು ಬೆಳಿಗ್ಗೆ 10.00 ಗಂಟೆಗೆ ಸೇರಲು ನಿಶ್ಚಯಿಸಿತು)

9. ಅನುಬಂಧ – 1

ರಾಜ್ಯದ ಮಾಜಿ ದೇವದಾಸಿಯರಿಗೆ ಮಾಸಾಶನ ನೀಡುವ ಬಗ್ಗೆ :

368 (617) ಶ್ರೀ ಆನಂದ ಸಿಂಗ್ (ಬಳ್ಳಾರಿ– ವಿಜಯನಗರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಾದ್ಯಂತ 2008ನೇ ಸಾಲಿನಲ್ಲಿ 2ನೇ ಹಂತದ ಮಾಜಿ ದೇವದಾಸಿಯರ ಸಮೀಕ್ಷೆಯನ್ನು ಮಾಡಲಾಗಿದ್ದು ಒಟ್ಟು ಎಷ್ಟು ಫಲಾನುಭವಿಗಳನ್ನು ಗುರುತಿಸಲಾಗಿದೆ;

ಆ) ಹೊಸಪೇಟೆ ತಾಲ್ಲೂಕಿನಲ್ಲಿ ಎಷ್ಟು ಫಲಾನುಭವಿಗಳನ್ನು ಗುರುತಿಸಲಾಗಿದೆ;

ಇ) ಈ ಫಲಾನುಭವಿಗಳಿಗೆ ಮಾಸಾಶನ ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ ಇಂತಹ ಪ್ರಕರಣಗಳನ್ನು ವಿಲೇ ಮಾಡಲು ಯಾವ ಕ್ರಮ ತೆಗೆದುಕೊಳ್ಳಲಾಗುತ್ತಿದೆ;

ಉ) ಬಳ್ಳಾರಿ ಜಿಲ್ಲೆ ವಿಜಯನಗರ ಮತಕ್ಷೇತ್ರದಲ್ಲಿ ಮಾಜಿ ದೇವದಾಸಿಯನ್ನು 2ನೇ ಹಂತದಲ್ಲಿ ಗುರುತಿಸಿದ್ದರೂ ಇದುವರೆವಿಗೂ ಯಾವುದೇ ರೀತಿಯ ಸರ್ಕಾರಿ ಸವಲತ್ತುಗಳನ್ನು ನೀಡಿರುವುದಿಲ್ಲ ಏಕೆ?